ಆ) ಎಲ್ಲ ಅರ್ಹ ಫಲಾನುಭವಿಗಳಿಗೆ ಪಿಂಚಣಿ ನಿಯಮಿತವಾಗಿ ಬಿಡುಗಡೆಯಾಗಿದ್ದು, ಯಾವುದೇ ಬಾಕಿ ಇರುವುದಿಲ್ಲ.

ಮಿನಿ ವಿಧಾನಸೌಧ ನಿರ್ಮಾಣ ಕಾಮಗಾರಿ

372(602); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲಾ ಕೇಂದ್ರದಲ್ಲಿ ಮಿನಿ ವಿಧಾನಸೌಧ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು; ಮಿನಿ ವಿಧಾನಸೌಧ ನಿರ್ಮಿಸಲು ಸ್ಥಳ ಬದಲಾವಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಈ ಸಾಲಿನಲ್ಲಾದರೂ ಮಿನಿ ವಿಧಾನಸೌಧ ನಿರ್ಮಾಣಕ್ಕೆ ಅನುದಾನ ಒದಗಿಸಿ ಕಾಮಗಾರಿಯನ್ನು ತಕ್ಷಣ ಪ್ರಾರಂಭಿಸಲಾಗುವುದೇ?

ಶ್ರೀ ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಬೀದರ್ ಜಿಲ್ಲಾ ಕೇಂದ್ರದಲ್ಲಿ ಮಿನಿ ವಿಧಾನಸೌಧ ನಿರ್ಮಿಸುವ ಸಂಬಂಧ ಲೋಕೋಪಯೋಗಿ ಇಲಾಖೆಯಿಂದ ₹ 10.00 ಕೋಟಿಗಳ ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗೆ ಪ್ರಸ್ತಾವನೆ ಸರ್ಕಾರದಲ್ಲಿ ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿದೆ. ಈ ಪ್ರಸ್ತಾವನೆಯ ಬಗ್ಗೆ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ಇವರಿಂದ ಅಭಿಪ್ರಾಯದೊಂದಿಗೆ ವರದಿಯನ್ನು ಕೋರಲಾಗಿದೆ. ಸದ್ಯದಲ್ಲಿ ಜಿಲ್ಲಾಧಿಕಾರಿಗಳ ಕಛೇರಿಯ ಆವರಣದಲ್ಲಿ ಮಿನಿ ವಿಧಾನಸೌಧ ನಿರ್ಮಿಸುವ ಪ್ರಸ್ತಾವನೆ ಇದ್ದು ಸ್ಥಳ ಬದಲಾವಣೆ ಮಾಡುವ ಪ್ರಸ್ತಾವನೆ ಉದ್ಭವಿಸುವುದಿಲ್ಲ.

ಆ) ಜಿಲ್ಲಾಧಿಕಾರಿಗಳಿಂದ ಅಭಿಪ್ರಾಯ/ ಪ್ರಸ್ತಾವನೆಯನ್ನು ಪಡೆದು ಅನುದಾನದ ಲಭ್ಯತೆಯನ್ನಾಧರಿಸಿ ನಿಯಮಾನುಸಾರ ಕಾಮಗಾರಿಯನ್ನು ಕೈಗೊಳ್ಳಲು ಕ್ರಮ ವಹಿಸಲಾಗುವುದು.

ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರಕ್ಕೆ ಒದಗಿಸಿರುವ ಅನುದಾನ

373(603); ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ